ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

## ಪತ್ರಿಕಾ ತುಣುಕುಗಳು
## PAPER CLIPPINGS

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER: ದಿನಾಂಕ : DATE :

# 14 ಮಂದಿಗೆ ಸೋಂಕು

**ಬೆಂಗಳೂರು:** ನಗರಕ್ಕೆ ಬ್ರಿಟನ್‌ನಿಂದ ಒಟ್ಟು 1,768 ಜನ ಇಲ್ಲಿಯ ವರೆಗೆ ಬಂದಿದ್ದು ಇವರಲ್ಲಿ ಶನಿವಾರ ಮೂವರಿಗೆ ಸೋಂಕು ದೃಢಪಟ್ಟಿದೆ. ಈ ಮೂಲಕ ನಗರದಲ್ಲಿ ಬ್ರಿಟನ್‌ನಿಂದ ಬಂದು ಸೋಂಕು ದೃಢಪಟ್ಟವರ ಸಂಖ್ಯೆ 14ಕ್ಕೆ ಏರಿಕೆಯಾದಂತಾಗಿದೆ.

ಅದೇ ರೀತಿ ಪಾಲಿಕೆಯ ಆರೋಗ್ಯಾಧಿಕಾರಿಗಳ ಸಂಪರ್ಕಕ್ಕೆ ಸಿಗದ ಪ್ರಯಾಣಿಕರ ಸಂಖ್ಯೆಯಲ್ಲೂ ಹೆಚ್ಚಳವಾಗಿದೆ. 1,768 ಜನರಲ್ಲಿ ಇಲ್ಲಿಯವರೆಗೆ ಒಟ್ಟು 902 ಜನರನ್ನು ಸೋಂಕು ಪರೀಕ್ಷೆಗೆ ಒಳಪಡಿಸಲಾಗಿದ್ದು, 587 ಜನರನ್ನು ಇನ್ನಷ್ಟೇ ಪರೀಕ್ಷೆಗೆ ಒಳಪಡಿಸಬೇಕಾಗಿದೆ.

**220 ಜನ ನಾಪತ್ತೆ:** ಒಂದೆಡೆ ಬ್ರಿಟನ್‌ನಿಂದ ಪ್ರಯಾಣಿಕರಲ್ಲಿ ಸೋಂಕು ದೃಢಪಡುತ್ತಿದೆ. ಇದೇ ವೇಳೆ ಸಂಪರ್ಕಕ್ಕೆ ಸಿಗದೆ ಇರುವವರ ಸಂಖ್ಯೆ ಹೆಚ್ಚಾಗುತ್ತಿರುವುದು ಆತಂಕಕ್ಕೆ ಕಾರಣವಾಗಿದೆ. 220 ಜನರಲ್ಲಿ ಹಲವರ ಮೊಬೈಲ್ ಸ್ವಿಚ್ ಆಫ್ ಆಗಿದೆ. ಅಲ್ಲದೆ, ನೀಡಿದ ವಿಳಾಸದಲ್ಲಿ ವಾಸವಿಲ್ಲ. ಹೀಗಾಗಿ ಪತ್ತೆ ಕಾರ್ಯ ಸಮಸ್ಯೆ ಆಗಿದೆ.